# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | 1331 |
| ಸದಸ್ಯರ ಹೆಸರು | ಶ್ರೀ. ಯು.ಬಿ. ವೆಂಕಟೇಶ್ |
| ಉತ್ತರಿಸುವ ದಿನಾಂಕ | 24-12-2021 |
| ಉತ್ತರಿಸುವ ಸಚಿವರು | ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಕೋವಿಡ್-19 ಅವಧಿಯಲ್ಲಿ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ನೀಡಲಾಗುವ ಯೋಜನೆಗಳು ಕುಂಠಿತಗೊಂಡಿದ್ದು, ಸದರಿ ಯೋಜನೆಗಳನ್ನು ಪ್ರಸ್ತುತ ಸಾಲಿನಲ್ಲಿ ಮುಂದುವರೆಸಲು ಕ್ರಮ ಕೈಗೊಳ್ಳಲಾಗಿದೆಯೇ: | ಕೋವಿಡ್-19 ಅವಧಿಯಲ್ಲಿ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಅನುಷ್ಠಾನ ಮಾಡುತ್ತಿರುವ ಯಾವುದೇ ಯೋಜನೆಗಳು ಕುಂಠಿತಗೊಂಡಿರುವುದಿಲ್ಲ. ಆದರೆ, ಕೋವಿಡ್-19 ಹಿನ್ನೆಲೆಯಲ್ಲಿ ನಿಗಮಗಳಿಂದ ಅನುಷ್ಠಾನ ಮಾಡುತ್ತಿರುವ ಸ್ವಯಂ ಉದ್ಯೋಗ ಯೋಜನೆಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಫಲಾನುಭವಿಗಳಿಗೆ ಸಹಾಯ ಮಾಡುವ ಉದ್ದೇಶದಿಂದ ಸಹಾಯಧನ ಮೊತ್ತವನ್ನು ಪರಿಷ್ಕರಿಸಲಾಗಿದೆ. ಅದರಂತೆ, ಎಲ್ಲಾ ಯೋಜನೆಗಳು ಮುಂದುವರೆದಿರುತ್ತವೆ. |
| ಆ) | ಹಾಗಿದ್ದಲ್ಲಿ, ಕಳೆದ ಎರಡು ವರ್ಷಗಳಲ್ಲಿ ಸಮಾಜ ಕಲ್ಯಾಣ ಇಲಾಖೆಗೆ ಹಂಚಿಕೆಯಾದ ಹಣ ಮತ್ತು ಖರ್ಚಾದ ಹಣವೆಷ್ಟು; | ಎರಡು ವರ್ಷಗಳಲ್ಲಿ ಸಮಾಜ ಕಲ್ಯಾಣ ಇಲಾಖೆಗೆ ಹಂಚಿಕೆಯಾದ ಮತ್ತು ವೆಚ್ಚವಾದ ಅನುದಾನದ ವಿವರ ಈ ಕೆಳಗಿನಂತಿದೆ.<br>(ರೂ.ಕೋಟಿಗಳಲ್ಲಿ)<br>ವರ್ಷ / ಹಂಚಿಕೆ / ವೆಚ್ಚ / %<br>2019-20 / 4231.72 / 4188.58 / 98.98<br>2020-21 / 3349.58 / 3276.08 / 97.81 |
| ಇ) | ಯಾವ ಯಾವ ಯೋಜನೆಗಳನ್ನು ಸ್ಥಗಿತಗೊಳಿಸಲಾಗಿತ್ತು. | ಕೋವಿಡ್-19 ಹಿನ್ನೆಲೆಯಲ್ಲಿ ಯಾವುದೇ ಯೋಜನೆಗಳನ್ನು ಸ್ಥಗಿತಗೊಳಿಸಿರುವುದಿಲ್ಲ. |
| ಈ) | ಪ್ರಸ್ತುತ ಎಲ್ಲಾ ಯೋಜನೆಗಳನ್ನು ಮುಂದುವರೆಸಲಾಗಿದೆಯೇ? | ಹೌದು |

ಸಂಖ್ಯೆ:ಸಕಇ 233 ಆರ್& ಐ 2021

(ಕೋಟ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಮತ್ತು ಹಿಂದುಳಿದ
ವರ್ಗಗಳ ಕಲ್ಯಾಣ ಸಚಿವರು.